ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕ, 1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು ; ಪ್ರಸ್ತಾವ ಏನೆಂದರೆ, "ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 21ರವರೆಗೆ

ಅಧ್ಯಕ್ಷರು :" ಖಂಡ 2 ರಿಂದ 21ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(2 ರಿಂದ 21ರವರೆಗೂ ಸೇರಿದಂತೆ ವಿಧೇಯಕ್ಕೆ ಸೇರಿಸಲಾಯಿತು)

ಖಂಡ: ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರಸಂಹಿತ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೆ ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999, ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅಂತರ್ಜಲ ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ವಿಧೇಯಕ, 1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಮಲ್ಲಿಕಾರ್ಜುನ ಖರ್ಗೆ (ವಿರೋಧಪಕ್ಷದ ನಾಯಕರು) : ನಾವು ಇದರ ಬಗ್ಗೆ ಸ್ವಲ್ಪ ಕೇಳಬೇಕಾಗಿದೆ, ಆ ಬಗ್ಗೆ ಅವರು ಕೂಡ ನಮಗೆ ತಿಳುವಳಿಕೆಯನ್ನು ಕೊಡಬೇಕಾಗಿದೆ, ಅವರು ಮೂವ್ ಮಾಡಿದ ಮೇಲೆ ವಿವರಿಸುತ್ತಾರೆಂದು ನಾವು ನಿರೀಕ್ಷೆ ಮಾಡಿದ್ದೆವು.

MR. SPEAKER : We are in a different spree. I am prepared to come back to facilitate a discussion if you so feel. I avoided a discussion on the last date. If you want to say a few words, I am prepared to stop here. Actually the House has given its consent for consideration. I leave it your wisdom.